**ಚಾಸಾಃ 8 ಪ್ರಾಸಾಃ 6**

## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಬೆಳ್ತಂಗಡಿ

**ಸಿಸಿ ಸಂಖ್ಯೆ: 517/2021**

| | | |
|---|---|---|
| ಹೆಸರು | : | ಗಣೇಶ್ |
| ತಂದೆಯ ಹೆಸರು | : | ಶಿವಣ್ಣ ಪೂಜಾರಿ |
| ಪ್ರಾಯ | : | 47 ವರ್ಷ |
| ಉದ್ಯೋಗ | : | ಕೃಷಿ |
| ವಾಸ | : | ಸಾವ್ಯ ಗ್ರಾಮ, ಬೆಳ್ತಂಗಡಿ ತಾಲೂಕು |

**ದಿನಾಂಕ 17.03.2025 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾಗಿ ಪ್ರಮಾಣವಚನ ಭೋಧಿಸಲಾಯಿತು.**

ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ

ಸಾಕ್ಷಿಗೆ ನಿಪಿ2ನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ2 ಕ್ಕೆ 2 - 3 ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ಆಗ ನನ್ನ ಜೊತೆ ಬೇರೆ ಯಾರು ಇರಲಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ಸ್ವಾದೀನಪಡಿಸಿಕೊಂಡಿರುವುದಿಲ್ಲ. ನಿಪಿ2 ನ್ನು ಎಷ್ಟು ಗಂಟೆಯಿಂದ ಎಷ್ಟು ಗಂಟೆಯವರೆಗೆ ದಾಖಲು ಮಾಡಿದ್ದಾರೆ ಗೊತ್ತಿಲ್ಲ. ಅಲ್ಲದೆ ಅದರಲ್ಲಿರುವ ಅಂಶಗಳನ್ನು ಸಹ ತಿಳಿದುಕೊಂಡಿರುವುದಿಲ್ಲ. ಆರೋಪಿತರ ಪರಿಚಯ ನನಗೆ ಇರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಸ.ಸ.ಅ ರವರಿಂದಃ**

ದಿಃ 12.1.2021 ರಂದು ನನ್ನ ಹಾಗೂ ಚಾಸಾ7 ರವರ ಸಮಕ್ಷಮದಲ್ಲಿ ಚಾಸಾ1 ರವರು ಹಲ್ಲೆ ಸಮಯದಲ್ಲಿ ಧರಿಸಿದ್ದ ಖಾಕಿ ಬಣ್ಣದ ಅರ್ಧ ತೋಳಿದ ಯುನಿಫಾರ್ಮ್ ಶರ್ಟನ್ನು ಬೆನಕ ಆಸ್ಪತ್ರೆಯ ಕೊಠಡಿಯ ಸಂಃ 201 ರಲ್ಲಿ ಹಾಜರುಪಡಿಸುವಾಗ ನಿಪಿ2 ಕ್ಕೆ ನನ್ನ ಸಹಿ ಪಡೆದಿದ್ದಾರೆ ಎಂದರೆ ನೆನಪಿಲ್ಲ. ಅಲ್ಲದೆ ಆ ಸಮಯದಲ್ಲಿ ಚಾಸಾ1 ರವರು ಒಂದು ಬುಕ್ ನ್ನು ಸಹ ಹಾಜರುಪಡಿಸಿದ್ದಾರೆ ಎಂದರೆ ನೆನಪಿಲ್ಲ. 4 ರಿಂದ 5 ಗಂಟೆಯವರೆಗೆ ದಾಖಲೆಯನ್ನು ಬರೆದು ಎರಡು ಸ್ವತ್ತುಗಳನ್ನು ನಮ್ಮ ಸಮಕ್ಷಮ ಸ್ವಾಧೀನಪಡಿಸಿ ನಮ್ಮ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ನಾನು 7ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿದ್ದೇನೆ. ಯಾವುದೇ ದಾಖಲೆಗೆ ಸಹಿ ಮಾಡಬೇಕಾದರೆ ಅದನ್ನು ಓದಿ ತಿಳಿದು ಸಹಿ ಮಾಡಬೇಕು ಎಂಬ ಸಾಮಾನ್ಯ ಜ್ಞಾನ ಇರುತ್ತದೆ. ನಿಪಿ2 ರಲ್ಲಿ ಬರೆದಿರುವ ವಿಚಾರಗಳು ಗೊತ್ತಿದ್ದರೂ ಸಹ ಅಲ್ಲದೆ ಆ ಸಮಯದಲ್ಲಿ ನ್ಯಾಯಾಲಯದ ಮುಂದಿರುವ ಮುದ್ದೆಮಾಲುಗಳನ್ನು ನನ್ನ ಸಮಕ್ಷಮದಲ್ಲಿ ಸ್ವಾಧೀನಪಡಿಸಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ 1 ರಿಂದ 4ನೇ ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಪ್ರಧಾನ ಸಿವಿಲ್ ನ್ಯಾಯಾಧೀಶರು
(ಸಾ.ಓ.ಹೇ.ಕೇ.ಸ.ಇ.ಎ.ಒ) ಮತ್ತು ಪ್ರ.ದ.ನ್ಯಾದಂ. ಬೆಳ್ತಂಗಡಿ